[redacted]



# ನೇಹಾ ಮನೆಗೆ ಭೇಟಿ ನೀಡಿ, ಪೋಷಕರಿಗೆ ಧೈರ್ಯ ತುಂಬಿದ ಜಗದೀಶ್ ಶೆಟ್ಟರ್

ಬೆಳಗಾವಿ: ಹುಬ್ಬಳ್ಳಿ-ಧಾರವಾಡ ಪಾಲಿಕೆ ಸದಸ್ಯ ನಿರಂಜನ ಹಿರೇಮಠ ಅವರ ಮನೆಗೆ ಮಾಜಿ ಸಿಎಂ ಹಾಗೂ ಬೆಳಗಾವಿ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಜಗದೀಶ್ ಶೆಟ್ಟರ್ ಅವರು ಭೇಟಿ ನೀಡಿ, ನೇಹಾ ಅವರ ತಂದೆ ತಾಯಿಗೆ ಸಾಂತ್ವನ ಹೇಳಿದ್ದಾರೆ.

ನೇಹಾ ಹತ್ಯೆ ಖಂಡಿಸಿ ಮುನ್ನೊಳ್ಳಿ ಪಟ್ಟಣದಲ್ಲಿ ನಡೆಯುತ್ತಿರುವ ಪ್ರತಿಭಟನೆಯಲ್ಲಿ ಭಾಗವಹಿಸಿದ್ದ ಬಳಿಕ ಅವರ ಮನೆಗೆ ಭೇಟಿ ನೀಡಿ, ನೇಹಾ ಪೋಷಕರಿಗೆ ಸಾಂತ್ವನ ಹೇಳಿದರು. ಈ ವೇಳೆ ಜಗದೀಶ್ ಶೆಟ್ಟರ್ ಬಳಿ ತಮ್ಮ ನೋವು ತೋಡಿಕೊಂಡಿರುವ ಪಾಲಿಕೆ ಸದಸ್ಯ ನಿರಂಜನ ಹಿರೇಮಠ್ ಅವರು, ನನ್ನ ಮಗಳು ತಾನಾಯಿತು ತನ್ನ ವಿದ್ಯಾಭ್ಯಾಸ ಆಯ್ತು ಎಂದು ಇರುತ್ತಿದ್ದಳು. ನೇಹಾ ಯಾರ ಜೊತೆನೂ ಸಲುಗೆ ಬೆಳೆಸಿರಲಿಲ್ಲ. ಕೊಲೆ ಮಾಡಿದವನ ಆಕೆ ಪ್ರೀತಿಸುತ್ತಿರಲಿಲ್ಲ. ಮಗಳ ಕೊಲೆ ಆದ ಮೇಲೆ ರಾಜ್ಯಾದ್ಯಂತ ಪ್ರತಿಭಟನೆಗಳು ಆಗುತ್ತಿರುವ ಹಿನ್ನೆಲೆ, ನೇಹಾ ಆ ಯುವಕನ ಜೊತೆ ಪ್ರೀತಿ ಮಾಡುತ್ತಿದ್ದಳು ಎಂದು ಸುಳ್ಳು ವದಂತಿಗಳು ಸೋಷಿಯಲ್ ಮೀಡಿಯಾದಲ್ಲಿ ವೈರಲ್ ಮಾಡುತ್ತಿದ್ದಾರೆ ಎಂದು ಕಣ್ಣೀರು ಹಾಕಿದ್ದಾರೆ.



ಜಗದೀಶ್ ಶೆಟ್ಟರ್ ಅವರು ಮಾತನಾಡಿ, ಈ ರೀತಿ ಘಟನೆಗಳು ಆಗಬಾರದಿತ್ತು, ಇದರ ಹಿಂದೆ ಯಾರೇ ಇದ್ದರು ಖಂಡಿತ ನ್ಯಾಯ ದೊರಕಿಸಿಕೊಡುತ್ತೇವೆ. ಈ ಪ್ರಕರಣ ಬಗ್ಗೆ ಸೂಕ್ತ ತನಿಖೆ ಆಗುವ ವರೆಗೆ ಹೋರಾಟ ಮಾಡಿ, ನ್ಯಾಯ ದೊರಕಿಸಲು ಪ್ರಯತ್ನಿಸುತ್ತೇವೆ. ನೀವು ಧೈರ್ಯದಿಂದ ಇರಬೇಕು ಎಂದು ನೇಹಾ ಪೋಷಕರಿಗೆ ಜಗದೀಶ್ ಶೆಟ್ಟರ್ ಅವರು ಸಾಂತ್ವನ ಹೇಳಿದ್ದಾರೆ.

# ಆರೋಪಿಗಳಿಗೆ ಗಲ್ಲು ಶಿಕ್ಷೆ ನೀಡಿ ಸಂತ್ರಸ್ಥ ಕುಟುಂಬಕ್ಕೆ ನ್ಯಾಯ ಒದಗಿಸಿ



ವಿಜಯಪುರ : ಕುಮಾರಿ ನೇಹಾ ನರಂಜನ ಹಿರೇಮಠ ಕೊಲೆ ಮಾಡಿದ ಆರೋಪಿಗೆ ಗಲ್ಲು ಶಿಕ್ಷೆ ನೀಡಿ ಸಂತ್ರಸ್ಥ ಕುಟುಂಬಕ್ಕೆ ನ್ಯಾಯ ಒದಗಿಸುವಂತೆ ಒತ್ತಾಯಿಸಿ ವಿಜಯಪುರ ಜಿಲ್ಲಾಧಿಕಾರಿಗಳ ಮೂಲಕ ವಿಜಯಪುರ ಜಿಲ್ಲಾ ಜಂಗಮ ಸಮಾಜದ ವತಿಯಿಂದ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಜಂಗಮ ಸಮಾಜ ಮುಖಂಡರಾದ ಸಂಜೀವ ಹಿರೇಮಠ ಹಾಗೂ ಪ್ರಧಾನ ಕಾರ್ಯದರ್ಶಿಗಳಾದ ಎಸ್.ಕೆ. ಸಾವಳಗಿಮಠ ಮಾತನಾಡಿ, ಹುಬ್ಬಳ್ಳಿ ನಗರದ ಬಿ.ವಿ.ಬಿ. ಕಾಲೇಜಿನ ಎಂ.ಸಿ.ಎ. ವಿದ್ಯಾರ್ಥಿನಿಯಾದ ಕುಮಾರಿ ನೇಹಾ ನರಂಜನ ಹಿರೇಮಠ ಅವರನ್ನು ದಿನಾಂಕ: 18-04-2024 ರಂದು ಹಾಡು ಹಗಲೇ ಕಾಲೇಜಿನ ಆವರಣದಲ್ಲಿ 9 ಸಲ ಚಾಕುವಿನಿಂದ ಹಿರಿದು ಕ್ರೂರ ಹತ್ಯೆ ಮಾಡಲಾಗಿದ್ದು ಪ್ರಮುಖ ಆರೋಪಿ ಫಯಾಜನನ್ನು ಈಗಾಗಲೇ ಪೋಲೀಸರು ಬಂಧಿಸಿದ್ದಾರೆ. ಇವನ ಜೊತೆ ಇತರೆ ನಾಲ್ಕು ಜನ ಸಹಪಾಠಿಗಳು ಇದ್ದಾರೆ ಎಂದು ತಿಳಿದು ಬಂದಿದೆ.

ಆದ್ದರಿಂದ ಆ ಇತರೆ ನಾಲ್ಕು ಜನ ಆರೋಪಿಗಳನ್ನು ಸಹ ಕೂಡಲೇ ಬಂಧಿಸಬೇಕು. ಎಲ್ಲ ಆರೋಪಿಗಳಿಗೆ ಜಾಮೀನು ಸಿಗದಂತೆ ಪೋಲೀಸರು ನ್ಯಾಯ ಸಮ್ಮತ ವರದಿ ನೀಡಬೇಕು. ಅದರಂತೆ ಪ್ರಾಸಿಕ್ಯೂಶನ್ ಕ್ರಮ ವಹಿಸಬೇಕು. ತನಿಖಾಧಿಕಾರಿಗಳಾದ ಪೋಲೀಸರು ಶೀಘ್ರ ತನಿಖೆ ಮುಗಿಸಿ ಆರೋಪ ಪಟ್ಟಿಯನ್ನು ನ್ಯಾಯಾಲಯಕ್ಕೆ ಸಲ್ಲಿಸಬೇಕು. ಸಂಬಂಧಪಟ್ಟ ಮಾನ್ಯ ಘನ ನ್ಯಾಯಾಲಯವು ಒಂದು ತಿಂಗಳ ಒಳಗೆ ವಿಚಾರಣೆ ಮುಗಿಸಿ ಸದ್ಯದ ಕಾನೂನಿನಲ್ಲಿ ಅವಕಾಶವಿರುವಂತೆ ಗರಿಷ್ಠಮಟ್ಟದ ಶಿಕ್ಷೆಯನ್ನು ವಿಧಿಸಲು ಕೋರಿಕೆ. ಕುಮಾರಿ ನೇಹಾ ಹಿರೇಮಠ ಅವರ ಮೇಲೆ ಆದಂತಹ ಕೃತ್ಯಗಳು ಇನ್ನೆಂದು ಮುಂದೆ ಮರುಕಳಿಸದಂತೆ ಇಂತಹ ಹೀನ ಮತ್ತು ಘೋರ ಅಪರಾಧಗಳಿಗೆ ಪೋಕ್ಸೊ ಕಾಯ್ದೆಯಂತೆ ವಿರಳ ಪ್ರಕರಣಗಳಲ್ಲಿ ಮರಣ ದಂಡನೆ ವಿಧಿಸುವಂತೆ ಅವಕಾಶ ನೀಡುವ ಕುರಿತಂತೆ ಕೇಂದ್ರ ಸರ್ಕಾರ ಮತ್ತು ರಾಜ್ಯ ಸರ್ಕಾರಗಳು ಈ ಕೂಡಲೇ ಕಾನೂನು ರೂಪಿಸಿ ಸುಘ್ರೀವಾಜ್ಞೆ ಮೂಲಕ ಜಾರಿಗೆ ತರಬೇಕು ಎಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಪ್ರಸಾದ ವಸ್ತ್ರದ ಹಾಗೂ ಹಿಂದೂ ಮಹಾಸಭಾದಿಂದ ಪೂರ್ಣಿಮಾ ಬದ್ನೂರ, ಭುವನೇಶ್ವರಿ ಕೋರವಾರ, ಮಾಯಾ ಚೌಧರಿ ಮಾತನಾಡಿ, ಈ ಕೊಲೆಯಲ್ಲಿ ರಾಜಕಾರಣ ಮಾಡದೆ ನಿಷ್ಪಕ್ಷಪಾತವಾಗಿ ತನಿಖೆ ನಡೆಸಬೇಕು. ತಪ್ಪಿತಸ್ಥರಿಗೆ ಗಲ್ಲು ಶಿಕ್ಷೆ ವಿಧಿಸಿ ಅದರಂತೆ ಇಂತಹ ಘಟನೆಗಳು ಮರುಕಳಿಸದಂತೆ ಕಠಿಣ ಕಾನೂನು ಜಾರಿಗೆ ತರಬೇಕು ಎಂದರು.

ಈ ಸಂದರ್ಭದಲ್ಲಿ ಬಸಯ್ಯ ಚಿನ್ನಕಾಳಿಮಠ, ಡಾ. ಬಸವರಾಜ ನಂದಿಕೋಲಮಠ, ವಿಶ್ವನಾಥ ಹಿರೇಮಠ ಕಾಖಂಡಕಿ, ರಾಚಯ್ಯ ಮಠಪತಿ, ಗುರಸಿದ್ದಯ್ಯ ಹಿರೇಮಠ, ಗುರಯ್ಯ ಯಾದವಾಡಮಠ, ಜೆಡಿಎಸ್ ಮುಖಂಡರಾದ ರಾಜು ಹಿಪ್ಪರಗಿ, ವಿಶ್ವನಾಥ ಹಿರೇಮಠ, ಮಲ್ಲಯ್ಯ ಹಿರೇಮಠ, ಪುಷ್ಪಾ ಗಚ್ಚಿನಮಠ, ಸುರೇಖಾ ಹಿರೇಮಠ, ಶೈಲಜಾ ನಂದಿಕೋಲಮಠ, ಸುನೀತಾ ಹಿರೇಮಠ, ವೀಣಾ ಹಿರೇಮಠ, ಚೈತ್ರಾ ಮಹಾಂತಮಠ, ಪೂಜಾ ಹಿರೇಮಠ, ಮೀನಾಕ್ಷಿ ಮಠ ಸೇರಿದಂತೆ ಮುಂತಾದವರು ಉಪಸ್ಥಿತರಿದ್ದರು.

# ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಹೋದಲ್ಲೆಲ್ಲ ಮಮಕಾರ



ಬೆಳಗಾವಿ: ಲೋಕಸಭಾ ಚುನಾವಣೆಯ ಕಾವು ದಿನದಿಂದ ದಿನಕ್ಕೆ ಏರತೊಡಗಿದೆ. 2ನೇ ಹಂತದ ಮತದಾನವಿರುವ ಬೆಳಗಾವಿ ಕ್ಷೇತ್ರದಲ್ಲಿ ರಾಜಕೀಯ ಪಕ್ಷಗಳು ಅತ್ಯಂಚ ಭಿರುಸಿನ ಪ್ರಚಾರ ನಡೆಸುತ್ತಿವೆ. ರಾಜ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಅವರು ಕಾಂಗ್ರೆಸ್ ಅಭ್ಯರ್ಥಿ ಮೃಣಾಲ ಹೆಬ್ಬಾಳಕರ್ ಪರ ಕಾಲಿಗೆ ಚಕ್ರ ಕಟ್ಟಿಕೊಂಡವರಂತೆ ಓಡಾಡುತ್ತಿದ್ದಾರೆ.

ಲಕ್ಷ್ಮೀ ಹೆಬ್ಬಾಳಕರ್ ಅವರಿಗೆ ಕ್ಷೇತ್ರ ಹೊಸದಲ್ಲ. 2014ರಲ್ಲಿ ಇದೇ ಕ್ಷೇತ್ರದಿಂದ ಸ್ಪರ್ಧಿಸಿ ಅಲ್ಪ ಮತಗಳಿಂದ ಪರಾಭವಗೊಂಡಿದ್ದರು. ಆದರೆ ಈ ಬಾರಿ ಮಗನನ್ನು ಕಣಕ್ಕಿಳಿಸಿದ್ದಾರೆ. ಕಾಂಗ್ರೆಸ್ ಪಕ್ಷದ ಸಾಧನೆ, ಶಾಸಕಿಯಾಗಿ, ಸಚಿವೆಯಾಗಿ ತಾವು ಮಾಡಿದ ಸಾಧನೆಗಳು ಬೆನ್ನಿಗಿವೆ. ವಿಶೇಷವೆಂದರೆ ಸಚಿವರು ಪ್ರಚಾರಕ್ಕೆಂದು ಹೊದಲ್ಲೆಲ್ಲ ಜನರು ಸ್ವಯಂ ಪ್ರೇರಣೆಯಿಂದ ಹೊರಗೆ ಬಂದು ಬೆಂಬಲ ಸೂಚಿಸುತ್ತಿದ್ದಾರೆ. ಜನರಲ್ಲಿ ಬದಲಾವಣೆಯ ನಿರೀಕ್ಷೆ ಕಾಣುತ್ತಿದೆ. ಕಾಂಗ್ರೆಸ್ ಸರಕಾರದ ಪಂಚ ಗ್ಯಾರಂಟಿ ಯೋಜನೆಗಳು ಬಹಳಷ್ಟು ಕೆಲಸ ಮಾಡಿರುವುದು ಎಲ್ಲೆಡೆ ಕಾಣುತ್ತಿದೆ. ಗ್ಯಾರಂಟಿ ಯೋಜನೆಗಳಿಂದಾಗಿ ನಾವು ನಿಟ್ಟುಸಿರು ಬಿಡುವಂತಾಗಿದೆ.

ಬೆಲೆ ಏರಿಕೆಯಿಂದ ಜೀವನ ಸಾಗಿಸುವುದೇ ಕಷ್ಟವಾಗಿತ್ತು. ಇಂತಹ ಪರಿಸ್ಥಿತಿಯಲ್ಲಿ ಗೃಹ ಲಕ್ಷ್ಮೀ, ಶಕ್ತಿ, ಅನ್ನ ಭಾಗ್ಯ, ಗೃಹ ಜ್ಯೋತಿ ಯೋಜನೆಗಳು ನಮ್ಮ ಕೈ ಹಿಡಿದಿವೆ. ಕಾಂಗ್ರೆಸ್ ಸರಕಾರ ನಮ್ಮದೇ ಸರಕಾರ ಎನ್ನುವ ಭಾವನೆ ಮೂಡಿದೆ ಎಂದು ಜನರು ಹೇಳುತ್ತಿದ್ದಾರೆ. ಹಳ್ಳಿಗಳಲ್ಲಿ ಮಹಿಳೆಯರು, ವಿಶೇಷವಾಗಿ ವೃದ್ಧೆಯರು ಹತ್ತಿರ ಬಂದು ಸಚಿವರನ್ನು ಅಪ್ಪಿ, ತಲೆಯ ಮೇಲೆ ಕೈ ಇಟ್ಟು ಹರಸಿ, ಹಾರೈಸುವುದು ಸಾಮಾನ್ಯವಾಗಿತ್ತು. ಲಕ್ಷ್ಮೀ ಹೆಬ್ಬಾಳಕರ್ ಮೇಲಿನ ಮಮಕಾರ (ಮಮತೆ) ಯಾವುದೇ ಊರಲ್ಲಿ ಹೋದರೂ ಕಾಣುತ್ತಿತ್ತು.

ಪ್ರತಿ ಊರಲ್ಲಿ ತೆರೆದ ವಾಹನದಲ್ಲಿ ಮೆರವಣಿಗೆ, ಹೂವಿನ ಮಳೆಗರೆಯುವುದು, ಆರತಿ ಮಾಡಿ ಸ್ವಾಗತಿಸುವುದು. ಜನರ ಇಂತಹ ಪ್ರೀತಿಗೆ ಹೇಗೆ ಪ್ರತಿಕ್ರಿಯಿಸುವುದು ಎಂದೇ ತಿಳಿಯುತ್ತಿಲ್ಲ. ಅವರ ಋಣ ತೀರಿಸುವುದು ಸಾಧ್ಯವೇ ಇಲ್ಲ. ಈ ಬಾರಿ ಮೃಣಾಲ ಹೆಬ್ಬಾಳಕರ್ ಆಯ್ಕೆಯಾಗುವುದು ಖಚಿತ. ಚುನಾವಣೆಯ ನಂತರ ಜನರು ನಿರೀಕ್ಷಿಸಿದ ರೀತಿಯಲ್ಲಿ ಅವರ ಸೇವೆ ಮಾಡಲಾಗುವುದು. ಹಿಂದಿನ ಯಾವುದೇ ಸಂಸದರು ಮಾಡದ ರೀತಿಯಲ್ಲಿ ಕ್ಷೇತ್ರವನ್ನು ಅಭಿವೃದ್ಧಿ ಮಾಡಿ ತೋರಿಸಲಾಗುವುದು ಎಂದು ಲಕ್ಷ್ಮೀ ಹೆಬ್ಬಾಳಕರ್ ಹೇಳುತ್ತಾರೆ.ಲಕ್ಷ್ಮೀ ಹೆಬ್ಬಾಳಕರ್ ಅವರು 2013ರಲ್ಲಿ ಮೊದಲ ಬಾರಿಗೆ ಸ್ಪರ್ಧಿಸಿದಾಗ ಗ್ರಾಮೀಣ ವಿಧಾನ ಸಭಾ ಕ್ಷೇತ್ರದಲ್ಲಿ ಸೋಲನುಭವಿಸಿದ್ದರು. ಆದರೆ ಸೋತ ನಂತರ ಮನೆಯಲ್ಲಿ ಕುಳಿತುಕೊಳ್ಳಲಿಲ್ಲ.

ಆಗ ರಾಜ್ಯದಲ್ಲಿ ಕಾಂಗ್ರೆಸ್ ಸರಕಾರವಿತ್ತು. ಒಬ್ಬ ಶಾಸಕನಗಿಂತ ಹೆಚ್ಚಾಗಿ ಕೆಲಸ ಮಾಡಿದರು. ಪ್ರತಿ ಹಳ್ಳಿ ಓಡಾಡಿ ಅಭಿವೃದ್ಧಿ ಯೋಜನೆಗಳನ್ನು ತಂದರು. ಇದರಿಂದಾಗಿ ಜನರು ಅವರನ್ನು ಪ್ರೀತಿಸಿದರು, ಅವರ ಮೇಲೆ ವಿಶ್ವಾಸ ತೋರಿಸಿದರು. ಪರಿಣಾಮವಾಗಿ 2018ರಲ್ಲಿ ಅವರು 52 ಸಾವಿರ ಮತಗಳ ಭಾರೀ ಅಂತರದಿಂದ ಗೆಲುವು ಸಾಧಿಸಿದರು. 2018ರಲ್ಲಿ ಗೆದ್ದ ನಂತರ ಕೂಡ ಒಂದೇ ಒಂದು ದಿನ ಮನೆಯಲ್ಲಿ ಕುಳಿತುಕೊಳ್ಳದೆ ಮಾದರಿಯಾಗಿ ಕ್ಷೇತ್ರವನ್ನು ಅಭಿವೃದ್ಧಿಪಡಿಸಿದರು. ಜನರ ಕಷ್ಟಗಳಿಗೆ ಸ್ಪಂದಿಸಿದರು, ಕ್ಷೇತ್ರದ ಮನೆಮಗಳೆನಿಸಿದರು. ಇದರಿಂದಾಗಿ 2023ರ ಚುನಾವಣೆಯಲ್ಲಿ 56 ಸಾವಿರ ಮತಗಳ ಅಂತರದಿಂದ ಗೆಲುವು ಸಾಧಿಸಿದರು. ನಂತರ ರಾಜ್ಯದ ಕಾಂಗ್ರೆಸ್ ಸರಕಾರದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆಯಾಗಿ ಸಾಕಷ್ಟು ಕೆಲಸ ಮಾಡಿದರು.

ಇದೀಗ ಬೆಳಗಾವಿ ಲೋಕಸಭಾ ಕ್ಷೇತ್ರದ ಜನರ ನಿರೀಕ್ಷೆ ಇದೇ ಆಗಿದೆ. ಲಕ್ಷ್ಮೀ ಹೆಬ್ಬಾಳಕರ್ ಅವರಂತಹ ಜನಪ್ರತಿನಿಧಿ ಬೇಕು, ಗ್ರಾಮೀಣ ಕ್ಷೇತ್ರದಂತೆ ಅಭಿವೃದ್ಧಿಯಾಗಬೇಕು ಎಂದು ಜನರು ಬಯಸುತ್ತಿದ್ದಾರೆ. ಪ್ರಚಾರಕ್ಕೆ ಹೋದಲ್ಲೆಲ್ಲ ಅದನ್ನೇ ಹೇಳುತ್ತಿದ್ದಾರೆ. ಸದಾ ನಮ್ಮೊಂದಿಗೆ ಇದ್ದು, ನಮ್ಮ ಕಷ್ಟ ಸುಖದಲ್ಲಿ ಭಾಗಿಯಾಗು ಜನಪ್ರತಿನಿಧಿ ಇದ್ದರೇನೇ ಚಂದ ಎಂದು ಜನರು ಹೇಳುತ್ತಿದ್ದಾರೆ.

# ಮೋದಿವರು ಜುಮ್ಲಾಗಳಿಗೆ ಉತ್ತರ ನೀಡುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸವಾಲು

ಬೆಂಗಳೂರು : ಮೋದಿವರು ಈ ಜುಮ್ಲಾಗಳಿಗೆ ಉತ್ತರ ನೀಡುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸವಾಲು ಹಾಕಿದ್ದಾರೆ. ಈ ಸಂಬಂಧ ಪತ್ರಿಕಾ ಪ್ರಕಟಣೆ ನೀಡಿರುವ ಅವರು ನರೇಂದ್ರ ಮೋದಿ ಮತ್ತು ಅವರ ಪಕ್ಷಕ್ಕೆ ದಮ್ಮು ಮತ್ತು ತಾಕತ್ ಇದ್ದರೆ ಹಿಂದಿನ ಎರಡು ಚುನಾವಣಾ ಪ್ರಣಾಳಿಕೆಯಲ್ಲಿ ನೀಡಲಾಗಿದ್ದ ಎಷ್ಟು ಭರವಸೆಗಳನ್ನು ಈಡೇರಿಸಿದ್ದೀರಿ ಎನ್ನುವ ಲೆಕ್ಕವನ್ನು ಮತದಾರರ ಮುಂದಿಡಬೇಕು.

ನಾನು ನುಡಿದಂತೆ ನಡೆದವನು. ಮುಖ್ಯಮಂತ್ರಿಯಾಗಿದ್ದ ಮೊದಲ ಅವಧಿಯಲ್ಲಿ ನಮ್ಮ ಪಕ್ಷದ ಪ್ರಣಾಳಿಕೆಯನ್ನು ಮುಂದಿಟ್ಟುಕೊಂಡು ಮಾಡಿದ ಕೆಲಸದ ಲೆಕ್ಕವನ್ನು ಜನರ ಮುಂದೆ ಇಟ್ಟಿದ್ದೆ. ಈ ಬಾರಿಯೂ ಈ ಕೆಲಸ ಮುಂದುವರಿಸುತ್ತಿದ್ದೇನೆ. ಈ ಕಾರಣಕ್ಕೆ ನರೇಂದ್ರ ಮೋದಿಯವರಲ್ಲಿ ಲೆಕ್ಕ ಕೇಳುವ ನೈತಿಕ ಅಧಿಕಾರ ನನಗಿದೆ ಎಂದು ತಿಳಿದುಕೊಂಡಿದ್ದೇನೆ.

1. ನರೇಂದ್ರ ಮೋದಿಯವರೇ, ಪ್ರಧಾನಮಂತ್ರಿ "ಸೂರ್ಯ ಘರ್ ಮುಫ್ತ್ ಬಿಜಲಿ" ಯೋಜನೆಯ ಮೂಲಕ ಬಡ ಕುಟುಂಬಗಳಿಗೆ ಉಚಿತ ವಿದ್ಯುತ್ ಪೂರೈಸುತ್ತೇವೆ ಎನ್ನುವುದು ಪ್ರಣಾಳಿಕೆಯಲ್ಲಿನ ಭರವಸೆ.

ವಾಸ್ತವ ಸಂಗತಿ ಏನೆಂದರೆ ಈ ಯೋಜನೆಯನ್ನು ಕಳೆದ ಬಜೆಟ್‌ನಲ್ಲಿ ಘೋಷಿಸಲಾಗಿತ್ತು. ಇದು ಸಂಪೂರ್ಣ ಉಚಿತ ಅಲ್ಲ. 1 ಕಿಲೋ ವ್ಯಾಟ್ ಉತ್ಪಾದಿಸುವ ರೂಫ್‌ಟಾಪ್ ಸೋಲಾ??? ಪ್ಯಾನೆಲ್‌ಗೆ 50,000 ರೂ. ವೆಚ್ಚವಾಗುತ್ತದೆ. ಇದರಲ್ಲಿ 40% ಹಣವನ್ನು ಖರೀದಿಸುವ ಕುಟುಂಬವೇ ಭರಿಸಬೇಕಾಗುತ್ತದೆ. ಬ್ಯಾಂಕ್‌ಗಳಿಂದ ಸಾಲ ಕೊಡಿಸಲಾಗುತ್ತಿದೆ. ಅಂದರೆ ಸೋಲಾರ್ ಪ್ಯಾನೆಲ್ ಅಳವಡಿಸುವ ವೆಚ್ಚದ ಹೊರೆ ಬಡ ಕುಟುಂಬದ ಮೇಲೆ ಹೊರಿಸಲಾಗಿದೆ. ಇದು ಯಾವ ಸೀಮೆಯ ಉಚಿತ ಹೇಳಿ?

2. ದೆಹಲಿಯ ಮಾದರಿಯಲ್ಲಿಯೇ ಪ್ರತಿಯೊಂದು ರಾಜ್ಯದಲ್ಲಿಯೂ ಏಮ್ಸ್ ( ಅಖಿಲ ಭಾರತ ವೈದ್ಯಕೀಯ ವಿಜ್ಞಾನ ಸಂಸ್ಥೆ) ಮಾದರಿಯಲ್ಲಿ ವೈದ್ಯಕೀಯ ಕೇಂದ್ರ ಸ್ಥಾಪಿಸುವುದಾಗಿ 2014ರ ಪ್ರಣಾಳಿಕೆಯಲ್ಲಿನ ಭರವಸೆ.

ವಾಸ್ತವ ಸಂಗತಿ ಏನೆಂದರೆ ದೇಶದಲ್ಲಿ ಇರುವುದೇ 19 ಏಮ್ಸ್ ಗಳು. ಈ ವರೆಗೆ ಕರ್ನಾಟಕದಲ್ಲಿ ಒಂದೇ ಒಂದು ಏಮ್ಸ್ ಸ್ಥಾಪನೆಯಾಗಿಲ್ಲ. ಹೊಸ ಏಮ್ಸ್ ಗಳು ಕೂಡಾ ಸಮರ್ಪಕವಾಗಿ ಕಾರ್ಯನಿರ್ವಹಿಸುತ್ತಿಲ್ಲ ಎಂಬ ದೂರಿದೆ. ಸ್ವತಃ ಮೋದಿ ದರ್ಬಾಂಗ್, ಮದುರೈಗಳಲ್ಲಿ ಏಮ್ಸ್ ಸ್ಥಾಪನೆಯಾಗಿವೆ ಎಂದರು. ಆದರೆ ಮಾಧ್ಯಮದ ವರದಿಗಳು ಇದು ಸುಳ್ಳು ಎಂದು ಹೇಳುತ್ತಿವೆ.

3. 70 ವರ್ಷ ಮೇಲ್ಪಟ್ಟವರಿಗೂ ಆಯುಷ್ಮಾನ್ ಸೇವೆ ವಿಸ್ತರಿಸಲಾಗುವುದು ಎನ್ನುವುದು ಪ್ರಣಾಳಿಕೆಯಲ್ಲಿನ ಭರವಸೆ.

ವಾಸ್ತವ ಸಂಗತಿ ಎಂದರೆ ಆಯುಷ್ಮಾನ್ ಯೋಜನೆಯ ಆರೋಗ್ಯ ವಿಮೆಯಲ್ಲಿ ಅಕ್ರಮ ನಡೆದಿರುವುದನ್ನು ಸಿಎಜಿಯೇ ವರದಿ ಮಾಡಿದೆ. 8.2 ಲಕ್ಷ ರೋಗಿಗಳು ಆಧಾರ್, ಬಯೋಮೆಟ್ರಿಕ್ ದಾಖಲೆಗಳಿಲ್ಲದೆ ಎರಡಕ್ಕಿಂತ ಹೆಚ್ಚು ಬಾರಿ ಚಿಕಿತ್ಸೆ ಪಡೆದಿದ್ದನ್ನು ವರದಿ ಗುರುತಿಸಿತ್ತು. ನಕಲಿ ವಿಮೆಗಳಿಗೆ ರೂ.1,697 ಕೋಟಿ ವರೆಗೆ ಸರ್ಕಾರದಿಂದ ಹಣ ನೀಡಲಾಗಿದೆ!

4. ಮೂರು ಕೋಟಿ ಲಖ್‌ಪತಿ ದೀದಿಗಳನ್ನು ಮಾಡಲಾಗುವುದು. ಈಗಾಗಲೇ 1 ಕೋಟಿ ಮಹಿಳೆಯರನ್ನು ಲಖ್‌ಪತಿ ದೀದಿಗಳನ್ನಾಗಿ ಮಾಡಿದ್ದು, ಮೂರು ಕೋಟಿ ಗ್ರಾಮೀಣ ಮಹಿಳೆಯರನ್ನು ಲಖ್‌ಪತಿ ದೀದಿಗಳನ್ನಾಗಿ ಸಬಲೀಕರಿಸಲಾಗುವುದು ಎನ್ನುವುದು ಪ್ರಣಾಳಿಕೆಯ ಇನ್ನೊಂದು ಭರವಸೆ.

ವಾಸ್ತವ ಸಂಗತಿ ಎಂದರೆ ಸ್ವಸಹಾಯ ಗುಂಪುಗಳಲ್ಲಿರುವ ಮಹಿಳೆಯರಿಗೆ ನೀಡಲಾಗಿದೆ ಎಂದು ಹೇಳಲಾದ ಈ ನೆರವನ್ನು ಪಡೆದ ಒಬ್ಬರೇ ಒಬ್ಬ ಕರ್ನಾಟಕದ ಮಹಿಳೆಯ ಕುರಿತು ಮಾಹಿತಿ ಲಭ್ಯವಾಗಿಲ್ಲ.

5. ನಮ್ಮ ಮಹಿಳೆಯರು ಕ್ರೀಡೆಯಲ್ಲಿ ದೇಶಕ್ಕೆ ಗೌರವ ತಂದಿದ್ದಾರೆ. ಮಹಿಳಾ ಕೇಂದ್ರಿತ ಕ್ರೀಡಾ ಕಾರ್ಯಕ್ರಮಗಳನ್ನು ರೂಪಿಸುವ ಮೂಲಕ ಕ್ರೀಡೆಯಲ್ಲಿ ಮಹಿಳೆಯ ಪಾಲ್ಗೊಳ್ಳುವಿಕೆಯನ್ನು ಪ್ರೋತ್ಸಾಹಿಸಲಾಗುವುದು ಎನ್ನುವುದು ಪ್ರಣಾಳಿಕೆಯಲ್ಲಿನ ಭರವಸೆ.

ವಾಸ್ತವ ಸಂಗತಿ ಎಂದರೆ ಕುಸ್ತಿ ಫೆಡರೇಷನ್ ಅಧ್ಯಕ್ಷ, ಬಿಜೆಪಿ ಸಂಸದ ಬ್ರಿಜ್ ಭೂಷಣ್ ಸಿಂಗ್ ವಿರುದ್ಧ ಒಲಿಂಪಿಕ್ ಪದಕ ವಿಜೇತೆ ಸಾಕ್ಷಿ ಮಲಿಕ್ ಲೈಂಗಿಕ ಶೋಷಣೆಯ ಆರೋಪ ಮಾಡಿದಾಗ, ಸರ್ಕಾರ ಯಾವುದೇ ಕ್ರಮಕೈಗೊಳ್ಳಲಿಲ್ಲ. ವರ್ಷಗಳ ಶ್ರಮದ ಫಲವಾದ ಪದಕವನ್ನು ಗಂಗಾ ನದಿಗೆ ಅರ್ಪಿಸಲು ಮುಂದಾಗುವಷ್ಟು ನೊಂದಿದ್ದ ಯುವತಿಯರಿಗೆ ಸರ್ಕಾರ ಸಾಂತ್ವನ ಹೇಳಲಿಲ್ಲ.

6. ಧಾನ ಮಂತ್ರಿ ಕಿಸಾನ್ ಸಮ್ಮಾನ್ ನಿಧಿ ಯೋಜನೆಯಡಿಯಲ್ಲಿ ರೈತರಿಗೆ ವಾರ್ಷಿಕ ರೂ.6,000 ಸಹಾಯಧನವನ್ನು ನೀಡುತ್ತಿದ್ದು, ರೈತರಿಗೆ ಆರ್ಥಿಕ ಬೆಂಬಲ ನೀಡುವುದಕ್ಕೆ ಬದ್ಧರಾಗಿದ್ದೇವೆ ಎನ್ನುವುದು ಪ್ರಣಾಳಿಕೆಯಲ್ಲಿನ ಭರವಸೆ.

ವಾಸ್ತವ ಸಂಗತಿ ಎಂದರೆ ಕಳೆದ ಐದು ವರ್ಷಗಳಲ್ಲಿ ಪಿಎಂ ಕಿಸಾನ್ ಸಮ್ಮಾನ್ ನಿಧಿ ಯೋಜನೆಯಲ್ಲಿ 11 ಕೋಟಿ ರೈತರಿಗೆ ಸಹಾಯ ಧನ ನೀಡಲಾಗಿದೆ ಎಂದು ಸರ್ಕಾರಿ ದಾಖಲೆಗಳು ಹೇಳುತ್ತವೆ. ಆದರೆ, ಕೃಷಿ ಸಚಿವರೇ ರಾಜ್ಯಸಭೆಯಲ್ಲಿ 4 ಲಕ್ಷ ಅನರ್ಹ ರೈತರಿಗೆ ರೂ. 3,000 ಕೋಟಿ ಸಹಾಯ ಧನ ವಿತರಣೆಯಾಗಿದ್ದು, ಮರಳಿ ವಸೂಲಿ ಮಾಡಲಾಗುತ್ತಿದೆ ಎಂದು ಹೇಳಿದ್ದರು. ದೇಶದಲ್ಲಿ 55% ಭೂ ರಹಿತ ರೈತರಿದ್ದು, ಅವರು ಈ ಯೋಜನೆಯ ವ್ಯಾಪ್ತಿಗೆ ಬರುವುದಿಲ್ಲ ಎನ್ನುವುದು ಮತ್ತೊಂದು ದುರಂತ!

7. ಪ್ರಧಾನ ಮಂತ್ರಿ ಫಸಲ್ ಬಿಮಾ ಯೋಜನೆಯನ್ನು ತಂತ್ರಜ್ಞಾನದ ಬಳಕೆಯ ಮೂಲಕ ಮತ್ತಷ್ಟು ಬಲಪಡಿಸಿ ನಿಖರ ಪರಿಶೀಲನೆ ನಡೆಸಿ ಪರಿಹಾರದ ಹಣವನ್ನು ವೇಗವಾಗಿ ಪಾವತಿಸಲಾಗುವುದು ಎನ್ನುವುದು ಪ್ರಣಾಳಿಕೆಯಲ್ಲಿನ ಭರವಸೆ.

ವಾಸ್ತವ ಸಂಗತಿ ಎಂದರೆ ಹಿಂದಿನ ಅವಧಿಯಲ್ಲಿ 5 ವರ್ಷಗಳಲ್ಲಿ ಈ ಯೋಜನೆಯಿಂದ ರೈತರಿಗೆ ಆದ ಲಾಭಕ್ಕಿಂತ ವಿಮಾ ಕಂಪನಿಗಳಿಗೆ ಆದ ಲಾಭವೇ ಹೆಚ್ಚು. ಕೃಷಿ ಸಚಿವ ತೋಮರ್ ಅವರು ರಾಜ್ಯಸಭೆಯಲ್ಲಿ ಉತ್ತರಿಸಿರುವಂತೆ, 2016-17ರಿಂದ 2021-22ರ ಅವಧಿಯಲ್ಲಿ ರೈತರು ರೂ. 1.59 ಲಕ್ಷ ಕೋಟಿ ಪ್ರೀಮಿಯಂ ಹಣ ಪಾವತಿಸಿದ್ದರು. ಈ ಪೈಕಿ ವಿಮಾ ಕಂಪನಿಗಳು ರೂ. 1.19 ಲಕ್ಷ ಕೋಟಿ ಹಣವನ್ನು ರೈತರಿಗೆ ಪಾವತಿಸಿದ್ದವು. ಅಂದರೆ ರೂ.40,000 ಕೋಟಿಗಳಷ್ಟು ಲಾಭಗಳಿಸಿದ್ದವು ಎಂದು ಅಂಕಿ ಅಂಶ ಹಂಚಿಕೊಂಡಿದ್ದರು.

8. ರಾಷ್ಟ್ರೀಯ ಕನಿಷ್ಠ ವೇತನವನ್ನು ಕಾಲದಿಂದ ಕಾಲಕ್ಕೆ ಪರಿಷ್ಕರಣೆ ಮಾಡಲಾಗುವುದು ಎನ್ನುವುದು ಪ್ರಣಾಳಿಕೆಯಲ್ಲಿನ ಭರವಸೆ.

ವಾಸ್ತವ ಸಂಗತಿ ಎಂದರೆ ಹತ್ತು ವರ್ಷಗಳ ಅವಧಿಯಲ್ಲಿ ಬಿಜೆಪಿ ಸರ್ಕಾರ ಕನಿಷ್ಠ ವೇತನವನ್ನು ಹೆಚ್ಚಿಸಿದ್ದು ಕೇವಲ 41 ರೂಪಾಯಿಗಳು ಮಾತ್ರ. 2004ರಿಂದ 2014ರ ಅವಧಿಯಲ್ಲಿ ಯುಪಿಎ ಸರ್ಕಾರ ಕನಿಷ್ಠ ವೇತನದ ಮಿತಿಯನ್ನು ರೂ.66 ರಿಂದ ರೂ.137ಕ್ಕೆ ಹೆಚ್ಚಿಸಿತ್ತು. ಬಿಜೆಪಿ ಈ ಮಿತಿಯನ್ನು 2017ರಲ್ಲಿ ರೂ.176 ಕ್ಕೆ ಏರಿಸಿತು. ಮುಂದುವರೆದು 2019ರಲ್ಲಿ ರೂ. 178ಕ್ಕೆ ಹೆಚ್ಚಿಸಿತು. ಆ ನಂತರದ ಐದು ವರ್ಷಗಳಲ್ಲಿ ಒಂದೇ ಒಂದು ರೂಪಾಯಿಯನ್ನೂ ಏರಿಕೆ ಮಾಡಲಿಲ್ಲ.

9. ಭಯೋತ್ಪಾದನೆಯನ್ನು ಸಹಿಸುವುದಿಲ್ಲ. 2016ರ ಸರ್ಜಿಕಲ್ ದಾಳಿ ಮತ್ತು 2019ರ ಉಗ್ರರ ಮೇಲಿನ ದಾಳಿ ಭಯೋತ್ಪಾದನೆ ನಿಯಂತ್ರಣದ ನಿಟ್ಟಿನಲ್ಲಿ ನಡೆದ ಪ್ರಯತ್ನಗಳಿಗೆ ಉದಾಹರಣೆಗಳು. ಎಲ್ಲ ರೀತಿ ಉಗ್ರವಾದದಿಂದ ಭಾರತವನ್ನು ರಕ್ಷಿಸುವುದಕ್ಕೆ ನಾವು ಬದ್ಧರಾಗಿದ್ದೇವೆ ಎನ್ನುವುದು ಪ್ರಣಾಳಿಕೆಯಲ್ಲಿನ ಭರವಸೆ.

ವಾಸ್ತವ ಸಂಗತಿ ಎಂದರೆ ಕಾಶ್ಮೀರದ ಉರಿ ಕಣಿವೆಯಲ್ಲಿ 2016ರಲ್ಲಿ ನಡೆದ ದಾಳಿಯ ರೀತಿಯ ಬಗ್ಗೆ ಹಲವು ಅನುಮಾನಗಳು ವ್ಯಕ್ತವಾದವು. 2019ರಲ್ಲಿ ನಡೆದ ಬಾಲಾಕೋಟ್ ಪ್ರಕರಣ ತೀವ್ರವಾದ ವಿವಾದಕ್ಕೆ ಕಾರಣವಾಯಿತು.

ಈ ದಾಳಿಗಳ ಹಿಂದೆ ರಾಜಕೀಯ ಉದ್ದೇಶಗಳು ಕೆಲಸ ಮಾಡಿರುವುದು ವಿವಾದಕ್ಕೆ ಕಾರಣವಾಯಿತು. ಪುಲ್ವಾಮಾ ದಾಳಿ ಕುರಿತು ಸತ್ಯಪಾಲ್ ಮಲಿಕ್ ನೀಡಿದ ಹೇಳಿಕೆಯು ಕೇಂದ್ರ ಸರ್ಕಾರದ ಶಂಕಾಸ್ಪದ ನಡೆಗೆ ಕನ್ನಡಿ ಹಿಡಿಯಿತು. ಇದಲ್ಲದೆ, 2017ರಲ್ಲಿ ಕಾಶ್ಮೀರದಲ್ಲಿ 370ನೇ ವಿಧಿ ಹಿಂಪಡೆದ ನಂತರ ಉಗ್ರರ ಚಟುವಟಿಕೆಗಳು ಕಡಿಮೆಯಾಯಿತು ಎಂದು ಸರ್ಕಾರ ಹೇಳಿಕೊಂಡರೂ ಉಗ್ರರ ದಾಳಿಗಳು ಮುಂದುವರಿದಿವೆ.

10. ಸಮಾಜಕ್ಕೆ, ವಿಶೇಷವಾಗಿ ಯುವಜನರಿಗೆ ಕಂಟಕವಾಗಿರುವ ಮಾದಕ ವಸ್ತುಗಳನ್ನು ನಿರ್ನಾಮ ಮಾಡುವ ಗುರಿ ಹೊಂದಿದ್ದು, ಸೂಕ್ತ ತಾಂತ್ರಿಕ, ಕಾನೂನಾತ್ಮಕ ಹಾಗೂ ಗುಪ್ತಚರ ಕಾರ್ಯಕ್ರಮಗಳನ್ನು ರೂಪಿಸಲಾಗುವುದು. ಮಾದಕ ವಸ್ತುಗಳ ಜಾಲವನ್ನು ಗುರುತಿಸಲು ಉಪಗ್ರಹ, ಡ್ರೋನ್ ಬಳಸಲಾಗುವುದು ಎನ್ನುವುದು ಪ್ರಣಾಳಿಕೆಯಲ್ಲಿನ ಭರವಸೆ.

ವಾಸ್ತವ ಸಂಗತಿ ಎಂದರೆ 2021ರ ಸೆಪ್ಟೆಂಬರ್‌ನಲ್ಲಿ ಅದಾನಿ ಮಾಲೀಕತ್ವದ ಮುಂದ್ರಾ ಬಂದರಿನಲ್ಲಿ ರೂ. 21 ಸಾವಿರ ಕೋಟಿ ಮೌಲ್ಯದ ಮಾದಕ ವಸ್ತು ವಶಪಡಿಸಿಕೊಳ್ಳಲಾಯಿತು. 2022ರ ಜುಲೈನಲ್ಲಿ 75 ಕೆಜಿ, 2024ರ ಫೆಬ್ರವರಿಯಲ್ಲಿ 3,300 ಕೆಜಿ ಮಾದಕವಸ್ತು ವಶಪಡಿಸಿಕೊಳ್ಳಲಾಯಿತು. ಇಷ್ಟು ಪ್ರಮಾಣದಲ್ಲಿ ಮಾದಕ ವಸ್ತು ದೇಶದೊಳಗೆ ಎಲ್ಲಿಂದ ಬರುತ್ತಿದೆ? ಇದನ್ನು ತಡೆಯಲು ಯಾಕಾಗುತ್ತಿಲ್ಲ?

11. ಈಶಾನ್ಯ ರಾಜ್ಯಗಳಲ್ಲಿ ಶಾಂತಿ ಸ್ಥಾಪನೆ ಮಾಡಲಾಗುವುದು. ಅಲ್ಲಿನ ಸಶಸ್ತ್ರ ಪಡೆಗಳ ವಿಶೇಷಾಧಿಕಾರ ಕಾಯಿದೆ ತೆರವು ಮಾಡಿ, ಈಶಾನ್ಯ ರಾಜ್ಯಗಳಲ್ಲಿರುವ ಅಂತರರಾಜ್ಯ ಸಂಘರ್ಷಗಳನ್ನು ಪರಿಹರಿಸುವುದಕ್ಕೆ ಸತತ ಪ್ರಯತ್ನ ಮಾಡುವೆವು ಎನ್ನುವದು ಪ್ರಣಾಳಿಕೆಯಲ್ಲಿನ ಭರವಸೆ.

ವಾಸ್ತವ ಸಂಗತಿ ಎಂದರೆ ಮಣಿಪುರದಲ್ಲಿ 8 ತಿಂಗಳ ಕಾಲ ಕುಕಿ ಮತ್ತು ಮೈತೇಯಿ ಸಮುದಾಯಗಳ ನಡುವೆ ಸಂಘರ್ಷ ನಡೆದು 175ಕ್ಕೂ ಹೆಚ್ಚು ಮಂದಿ ಹತ್ಯೆಗೀಡಾದರು, 60 ಸಾವಿರ ಮಂದಿ ನಿರಾಶ್ರಿತರಾದರು. ಈ ಸಂದರ್ಭದಲ್ಲಿ ಜಗತ್ತಿನೆಲ್ಲೆಡೆಯಿಂದ ತೀವ್ರವಾದ ಸ್ಪಂದನೆ ವ್ಯಕ್ತವಾದರೂ, ದೇಶದ ಪ್ರಧಾನಿ ಮಣಿಪುರದ ಬಗ್ಗೆ ಒಂದು ನಿಮಿಷವೂ ಮಾತನಾಡಲಿಲ್ಲ. ಅತ್ತ ಕಡೆ ಮುಖ ಹಾಕಲಿಲ್ಲ.

# ಹವಾಮಾನ ವೈಪರಿತ್ಯ ಮಾವಿನ ಇಳುವರಿ ಮೇಲೆ ಪರಿಣಾಮ

ಬೆಂಗಳೂರು: ಚಂಡಮಾರುತದ ಕಾರಣದಿಂದಾಗಿ ರಾಜ್ಯದಲ್ಲಿ ಮೋಡ ಕವಿದ ಮತ್ತು ಚಳಿ, ತುಂತುರು ಮಳೆ ಕಂಡುಬಂತು. ಆದರೆ, ಇದೀಗ ಚಳಿಗಾಲದ ಹೊರತಾಗಿಯೂ ತಾಪಮಾನವು ಏರುತ್ತಾ ಸಾಗುತ್ತಿದೆ.

ಭಾರತೀಯ ಹವಾಮಾನ ಇಲಾಖೆಯ (ಐಎಂಡಿ) ಅಧಿಕಾರಿಗಳ ಪ್ರಕಾರ, ಈ ವರ್ಷ ಹಗಲು ಮತ್ತು ರಾತ್ರಿಯಲ್ಲಿ ತಾಪಮಾನವು ಸಾಮಾನ್ಯಕ್ಕಿಂತ 1-2 ಡಿಗ್ರಿ ಸೆಲ್ಸಿಯಸ್ ಹೆಚ್ಚಾಗಿರುತ್ತದೆ. ಅಂದರೆ ಈ ಋತುವಿನಲ್ಲಿ ಕೊರೆಯುವ ಚಳಿಯ ಅನುಭವವಿರುವುದಿಲ್ಲ. ಇದು ಹಣ್ಣುಗಳ ರಾಜ ಮಾವಿನ ಇಳುವರಿ ಮೇಲೆ ಪರಿಣಾಮ ಬೀರಲಿದೆ. ಸಾಮಾನ್ಯವಾಗಿ ಮಾವು ಡಿಸೆಂಬರ್‌ನಲ್ಲಿ ಹೂಬಿಡುತ್ತದೆ.ಐಎಂಡಿಯ ಬೆಂಗಳೂರಿನ ವಿಜ್ಞಾನಿ ಎ ಪ್ರಸಾದ್ ಟಿಎಸ್‌ಇ ಜೊತೆಗೆ ಮಾತನಾಡಿ, ಎಲ್ ನಿನೊ ಪರಿಣಾಮದಿಂದಾಗಿ, ಹಗಲಿನಲ್ಲಿ (ಗರಿಷ್ಠ) ತಾಪಮಾನವು ಸಾಮಾನ್ಯಕ್ಕಿಂತ ಒಂದು ಡಿಗ್ರಿ ಸೆಲ್ಸಿಯಸ್ ಮತ್ತು ಕನಿಷ್ಠ (ರಾತ್ರಿ) ತಾಪಮಾನವು ಸಾಮಾನ್ಯಕ್ಕಿಂತ 2 ಡಿಗ್ರಿ ಸೆಲ್ಸಿಯಸ್ ಹೆಚ್ಚಿರುತ್ತದೆ ಮತ್ತು ಬೆಂಗಳೂರಿನಲ್ಲಿ ಈಗಾಗಲೇ ಆ ಅನುಭವ ಉಂಟಾಗುತ್ತಿದೆ ಎಂದು ತಿಳಿಸಿದರು.ಸಾಮಾನ್ಯವಾಗಿ ಚಳಿಗಾಲವು ಡಿಸೆಂಬರ್ ಅಂತ್ಯದಿಂದ ಪ್ರಾರಂಭವಾಗುತ್ತದೆ. ಆದರೆ ಬೆಂಗಳೂರು ಮತ್ತು ದಕ್ಷಿಣ ಒಳನಾಡಿನ ಕೆಲವು ಭಾಗಗಳಲ್ಲಿ ಇದು ಡಿಸೆಂಬರ್ ಮೊದಲ ವಾರದಿಂದಲೇ ಪ್ರಾರಂಭವಾಗಿದೆ. ಕಳೆದ ವರ್ಷ, ಚಳಿಗಾಲ ಡಿಸೆಂಬರ್ ಎರಡನೇ ವಾರದಿಂದ ಪ್ರಾರಂಭವಾಯಿತು. ಈ ವರ್ಷ ಅಷ್ಟಾಗಿ ಚಳಿಯು ಇರುವುದಿಲ್ಲ. ಆದರೆ, ವಾತಾವರಣವು ತಂಪಾಗಿರುತ್ತದೆ ಮತ್ತು ಆಹ್ಲಾದಕರವಾಗಿರುತ್ತದೆ. ಕಳೆದ ವರ್ಷ, ಡಿಸೆಂಬರ್‌ನಲ್ಲಿ ಕನಿಷ್ಠ 15 ಡಿಗ್ರಿ ಸೆಲ್ಸಿಯಸ್ ತಾಪಮಾನ ದಾಖಲಾಗಿತ್ತು. ಈ ವರ್ಷ, ಇದು ಬಹುಶಃ ಹೆಚ್ಚಿರುತ್ತದೆ. ಲಘು ಚಳಿಗಾಲದ ಅನುಭವ ಕರ್ನಾಟಕದಾದ್ಯಂತ ಇರುತ್ತದೆ. ಐಎಂಡಿ ದಾಖಲೆಗಳ ಪ್ರಕಾರ, ಬುಧವಾರ ಗರಿಷ್ಠ 31.2 ಮತ್ತು ಕನಿಷ್ಠ 20.4 ಡಿಗ್ರಿ ಸೆಲ್ಸಿಯಸ್ ತಾಪಮಾನ ದಾಖಲಾಗಿದೆ. ಗುರುವಾರ ಗರಿಷ್ಠ 31.2 ಮತ್ತು ಕನಿಷ್ಠ 20.4 ಡಿಗ್ರಿ ಸೆಲ್ಸಿಯಸ್ ದಾಖಲಾಗಿದೆ. ಈ ಋತುವಿನಲ್ಲಿ ಬೆಂಗಳೂರಿನ ಸಾಮಾನ್ಯ ತಾಪಮಾನವು ಕ್ರಮವಾಗಿ 26.9 ಮತ್ತು 16.4 ಡಿಗ್ರಿ ಸೆಲ್ಸಿಯಸ್ ಆಗಿದೆ.ಈ ಋತುವಿನಲ್ಲಿ ಇಲ್ಲಿಯವರೆಗೆ ಮಾವಿನ ಹೂವು ಕಡಿಮೆಯಾಗಿದೆ. ಮಾವನ್ನು ಹೆಚ್ಚಾಗಿ ಬೆಳೆಯುವ ಶ್ರೀನಿವಾಸಪುರ ಸೇರಿದಂತೆ ಕರ್ನಾಟಕದ ಕೆಲವು ಭಾಗಗಳಲ್ಲಿ ಇತ್ತೀಚೆಗೆ ಚಂಡಮಾರುತದ ಪರಿಣಾಮದಿಂದಾಗಿ ಬಂದ ಮಳೆಯು ಹೂಬಿಡುವಿಕೆಯ ಮೇಲೂ ಪರಿಣಾಮ ಬೀರಿದೆ ಎಂದರು.

ಮಾವು ಒಂದು ಗಟ್ಟಿಮುಟ್ಟಾದ ಬೆಳೆ. ಆದರೆ, ಹವಾಮಾನ ಪರಿಸ್ಥಿತಿಗಳಿಗೆ ಸೂಕ್ಷ್ಮವಾಗಿರುತ್ತದೆ. ಉತ್ತಮ ಇಳುವರಿಯನ್ನು ಪಡೆಯಲು ಹೂವುಗಳಲ್ಲಿ ಒತ್ತಡವನ್ನು ಉಂಟುಮಾಡಲು ತಂಪಾದ ಸಂಜೆ ಮತ್ತು ರಾತ್ರಿ ಕಡಿಮೆ ತಾಪಮಾನ ಮತ್ತು ಬೆಚ್ಚಗಿನ ದಿನಗಳು ಬೇಕಾಗುತ್ತದೆ.

## ಪ್ರಜಾಪ್ರಭುತ್ವ ಬಲಪಡಿಸುವುದಕ್ಕೆ ನನ್ನ ಮೊದಲ ಸಲದ ಮತ

ಜಗತ್ತು ಕಂಡ ದೊಡ್ಡ ಪ್ರಜಾಪ್ರಭುತ್ವ ರಾಷ್ಟ್ರವೆಂದರೆ ಅದು ಭಾರತ. ಭಾರತ ದೊಡ್ಡ ಪ್ರಜಾಪ್ರಭುತ್ವ ರಾಷ್ಟ್ರವಾಗಿರುವುದು ಡಾ. ಬಿ.ಆರ್. ಅಂಬೇಡ್ಕರ್ ರಚಿಸಿರುವ ಸಂವಿಧಾನದಿಂದಾಗಿ. ಈ ಪ್ರಜಾಪ್ರಭುತ್ವವನ್ನು ಬಲಪಡಿಸುವುದು ಅದು ಮತದಾನದ ಮೂಲಕ. ಪ್ರತಿಯೊಬ್ಬ ಮತದಾರರು ಪ್ರಜಾಪ್ರಭುತ್ವದ ಇಂದಿನ ನಂಬಿಕೆ ಮತ್ತು ನಾಳೆಯ ಭರವಸೆಗಾಗಿ ಮತದಾನ ಮಾಡಲೇಬೇಕು. ಪ್ರಸ್ತುತ ಲೋಕಸಭಾ ಚುನಾವಣೆಗೆ ಮತದಾರರ ಪಟ್ಟಿಯಲ್ಲಿ ನನ್ನ ಹೆಸರು ಸೇರ್ಪಡೆಯಾಗಿರುವುದು ಸಂತೋಷದಾಯಕ ವಿಷಯ. ಹೀಗಾಗಿ ನನ್ನ ಮೊದಲ ಸಲದ ಮತವನ್ನು ಪ್ರಜಾಪ್ರಭುತ್ವ ಬಲಪಡಿಸುವುದಕ್ಕೆ ನೀಡುತ್ತೇನೆ. ಇದರಿಂದಾಗಿ ಬಲಿಷ್ಠ ರಾಷ್ಟ್ರವನ್ನು ನಿರ್ಮಾಣ ಮಾಡಬಹುದು. ಆದ್ದರಿಂದ ಪ್ರತಿಯೊಬ್ಬ ಮತದಾರರು ಕೂಡ ಭಾಗಿಯಾಗಿ.



ವಿನೇಶ್. ಶಿವರಾಜ. ಕಾಂಬಳೆ
ಡಿಪ್ಲೋಮಾ ವಿದ್ಯಾರ್ಥಿ ಧಾರವಾಡ

## ರಾಜ್ಯದಲ್ಲಿ ಜಿಹಾದಿ ಕೃತ್ಯಗಳು ಹೆಚ್ಚುತಿದೆ: ಹುಬ್ಬಳ್ಳಿ ಕಾಲೇಜು ವಿದ್ಯಾರ್ಥಿನಿ ಹತ್ಯೆ ಖಂಡಿಸಿದ ಜಗದೀಶ್ ಶೆಟ್ಟರ್

ಬೆಳಗಾವಿ: ಕಾಂಗ್ರೆಸ್ ಸರ್ಕಾರದ ಅತೀವ ಓಲೈಕೆಯಿಂದ ರಾಜ್ಯದಲ್ಲಿ ಜಿಹಾದಿ ಕೃತ್ಯಗಳು ನಡೆಯುತ್ತಿದೆ. ಇದು ಜನರಲ್ಲಿ ಆತಂಕವನ್ನು ಉಂಟುಮಾಡಿದೆ. ಹುಬ್ಬಳ್ಳಿಯ ಪ್ರತಿಷ್ಠಿತ ಬಿವಿಬಿ ಕಾಲೇಜಿನಲ್ಲಿ ಹುಬ್ಬಳ್ಳಿ-ಧರವಾಡ ಮಹಾನಗರ ಪಾಲಿಕೆ ಕಾರ್ಪೊರೇಟರ್ ನರಂಜನ ಹಿರೇಮಠ ಅವರ ಮಗಳು ನೇಹಾ ಹಿರೇಮಠ ಎಂಬುವವರನ್ನು ಕಾಲೇಜಿನ ಆವರಣದಲ್ಲಿಯೇ ಚಾಕು ಇರಿದು ಬರ್ಬರವಾಗಿ ಹತ್ಯೆ ಮಾಡಲಾಗಿದ್ದು, ಈ ಕೃತ್ಯ ಖಂಡನೀಯ. ಈ ರೀತಿ ಘಟನೆಗಳು ನಡೆಯದಂತೆ ರಾಜ್ಯ ಕಾಂಗ್ರೆಸ್ ಸರ್ಕಾರ ಕ್ರಮ ಕೈಗೊಳ್ಳಬೇಕು. ಈ ಘಟನೆ ಸಂಭಂದ ಸೂಕ್ತ ತನಿಖೆ ಆಗಿ ತಪ್ಪಿಸ್ಥರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಮಾಜಿ ಸಿಎಂ ಹಾಗೂ ಬೆಳಗಾವಿ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಜಗದೀಶ್ ಶೆಟ್ಟರ್ ಅವರು ಆಗ್ರಹಿಸಿದ್ದಾರೆ.